ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ	:	516
ಸದಸ್ಯರ ಹೆಸರು	:	ಶ್ರೀ ಅರವಿಂದ ಕುಮಾರ್ ಅರಳಿ, (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ	:	09.03.2020
ಉತ್ತರಿಸುವ ಸಚಿವರು	:	ಮಾನ್ಯ ವಿದ್ಯುನ್ಮಾನ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು.

<table>
<tr><th>ಪ್ರಶ್ನೆ</th><th>ಉತ್ತರ</th></tr>
<tr><td>ಅ) 2015-16ನೇ ಸಾಲಿನಲ್ಲಿ ಬೀದರ್ ಜಿಲ್ಲೆಗೆ ಐ.ಟಿ ಪಾರ್ಕ್ ಮತ್ತು Incubation centreಗಾಗಿ ಎಷ್ಟು ಅನುದಾನ ಬಜೆಟ್‌ನಲ್ಲಿ ಘೋಷಿಸಲಾಗಿತ್ತು; ತಾಂತ್ರಿಕ ಕಾರಣಗಳಿಂದ ಈ ಯೋಜನೆಗೆ ಕೈತಪ್ಪಿರುವ ವಿಷಯ ಸರ್ಕಾರದ ಗಮನಕ್ಕಿದೆಯೇ; ಇದ್ದಲ್ಲಿ, ಈ ಯೋಜನೆ ಪ್ರಾರಂಭಿಸುವ ಯೋಚನೆ ಸರ್ಕಾರದ ಮುಂದಿದೆಯೇ;</td><td rowspan="2">2015-16ನೇ ಸಾಲಿನಲ್ಲಿ ಬೀದರ್ ಜಿಲ್ಲೆಯಲ್ಲಿ ಐ.ಟಿ ಪಾರ್ಕ್ ಮತ್ತು Incubation centre ಸ್ಥಾಪನೆ ಬಗ್ಗೆ ಆಯವ್ಯಯದಲ್ಲಿ ಯಾವುದೇ ಅನುದಾನ ಘೋಷಣೆ ಆಗಿರುವುದಿಲ್ಲ.

ಆದರೆ, 2016-17ನೇ ಸಾಲಿನ ರಾಜ್ಯ ಆಯವ್ಯಯದಲ್ಲಿ, ಬೀದರ್‌ನಲ್ಲಿ ಹೊಸ ಐಟಿ ಪಾರ್ಕ್-ಇನ್ಕ್ಯುಬೇಟರ್‌ಗಳನ್ನು ಸ್ಥಾಪಿಸಲು ಪೂರ್ವಭಾವಿ ಸಿದ್ಧತೆ ಮಾಡಲಾಗುವುದೆಂದು ಘೋಷಿಸಲಾಗಿರುತ್ತದೆ. ಆದರೆ, ಈ ಯೋಜನೆಗಾಗಿ ಸದರಿ ಆಯವ್ಯಯದಲ್ಲಿ ಯಾವುದೇ ಅನುದಾನವನ್ನು ಘೋಷಿಸಲಾಗಿರುವುದಿಲ್ಲ.

ಬೀದರ್ ನಲ್ಲಿ ನವೋದ್ಯಮಗಳನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ, ಯುವ ವಿದ್ಯಾರ್ಥಿಗಳ ಹೊಸ ಪರಿಕಲ್ಪನೆಗಳನ್ನು ಪರಿಪೋಷಿಸಲು ಹಾಗೂ ಉತ್ತೇಜಿಸುವ ಸಲುವಾಗಿ ಸರ್ಕಾರದ ವತಿಯಿಂದ ಬೀದರ್‌ನ ಗುರುನಾನಕ್ ದೇವ್ ಕಾಲೇಜ್ ಆಫ್ ಇಂಜಿನಿಯರಿಂಗ್ ನಲ್ಲಿ ನ್ಯೂ ಏಜ್ ಸೆಂಟರ್ ಅನ್ನು ಸ್ಥಾಪಿಸಲಾಗಿರುತ್ತದೆ.

ಈ ನ್ಯೂ ಏಜ್ Incubation centre ಬೀದರ್ ನ ವಿದ್ಯಾರ್ಥಿಗಳಿಗೆ ತಮ್ಮ ನಾವೀನ್ಯತೆ ಹಾಗೂ ಆವಿಷ್ಕಾರಗಳನ್ನು ಅಭಿವೃದ್ಧಿಪಡಿಸಲು ಇನ್ಕ್ಯುಬೇಷನ್ ಹಾಗೂ ಪ್ರೋಟೋಟೈಪಿಂಗ್ ಸೌಲಭ್ಯಗಳನ್ನು ಮತ್ತು ನವೋದ್ಯಮಗಳನ್ನು ಅಭಿವೃದ್ಧಿಪಡಿಸಲು ಬೇಕಾಗಿರುವ ಮಾರ್ಗದರ್ಶನ ಹಾಗೂ ಬೆಂಬಲವನ್ನು ಒದಗಿಸುತ್ತಿದೆ.</td></tr>
<tr><td>ಆ) ಹಾಗಿದ್ದಲ್ಲಿ, ಈ ಯೋಜನೆಯನ್ನು ಯಾವಾಗ ಪ್ರಾರಂಭಿಸಲಾಗುವುದು; ಇಲ್ಲದಿದ್ದಲ್ಲಿ ಕಾರಣವೇನು?</td></tr>
</table>

ಸಂಖ್ಯೆ: ಐಟಿಬಿಟಿ 07 ಎಲ್.ಸಿ.ಎಂ. 2020

(ಡಾ|| ಅಶ್ವಥ್ ನಾರಾಯಣ ಸಿ. ಎನ್)
ಉಪಮುಖ್ಯಮಂತ್ರಿಗಳು ಹಾಗೂ
ವಿದ್ಯುನ್ಮಾನ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ
ಮತ್ತು ತಂತ್ರಜ್ಞಾನ ಸಚಿವರು